# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 190 ಕೆಎಸ್‌ಎಸ್ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:22-06-2016

## : ಅಧಿಸೂಚನೆ :

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 110 ಕೆಎಸ್‌ಎಸ್ 2015 ದಿನಾಂಕ 05-12-2015 ರಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂಧದಲ್ಲಿ ದಿನಾಂಕ: 31-03-2015 ರಲ್ಲಿ ಇದ್ದಂತೆ ಅಂತೀಮ ಜೇಷ್ಠತಾ ಪಟ್ಟಿಯಲ್ಲಿ ಶ್ರೀ ಟಿ. ಮುರಡಯ್ಯ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಇವರ ಜೇಷ್ಠತಾ ಕ್ರಮ ಸಂಖ್ಯೆ 77 ಕ್ಕೆ ಕ್ರಮ ಸಂಖ್ಯೆ "41 ಎ" ಎಂದು ತಾತ್ಕಾಲಿಕವಾಗಿ ಪ್ರಕಟಿಸಲಾಗಿದೆ.

ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂಧದಲ್ಲಿ ದಿನಾಂಕ: 31-03-2015 ರಲ್ಲಿ ಇದ್ದಂತೆ ಈ ಕರಡು ಜೇಷ್ಠತೆಯನ್ನು ಪ್ರಕಟಿಸಲಾಗಿದೆ. ತಾತ್ಕಾಲಿಕ ಜೇಷ್ಠತೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವೆಬ್‌ಸೈಟ್‌ನಲ್ಲಿ ಎಲ್ಲರ ಗಮನಕ್ಕಾಗಿ ಪ್ರಕಟಿಸಲಾಗಿದೆ. ಸದರಿ ಜೇಷ್ಠತಾ ಪಟ್ಟಿ ಬಗ್ಗೆ ಸಲಹೆ/ಆಕ್ಷೇಪಣೆಯಗಳು ಏನಾದರೂ ಇದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳು ಲಿಖಿತ ಮೂಲಕ ಈ ಅಧಿಸೂಚನೆಯಲ್ಲಿ ಪ್ರಕಟಿಸಲಾದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು. ಸದರಿ ಕಾಲಮಿತಿಯೊಳಗೆ ಸ್ವೀಕರಿಸುವ ಸಲಹೆ/ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದು.

ಈ ಅಧಿಸೂಚನೆಯು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಪ್ರಸ್ತುತ ಬಾಕಿ ಇರುವ ಅರ್ಜಿ ಸಂಖ್ಯೆ: 6801-5/2011 ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ: 103129-103515/2014 ಹಾಗೂ ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಅರ್ಜಿ ಸಂಖ್ಯೆ: 2123-2168/2014 ಹಾಗೂ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಇತರೆ ದಾವೆಗಳ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

22/6/2016

(ಎಸ್.ರಂಗನಗೌಡ).
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

22/6/16

**ಇವರಿಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಆದೇಶದ 100 ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸಲು ಕೋರಿದೆ.

1) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೋಟೀಸ್ ಬೋರ್ಡಿನಲ್ಲಿ ಪ್ರಕಟಿಸಲು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೋಟೀಸ್ ಬೋರ್ಡಿನಲ್ಲಿ ಪ್ರಕಟಿಸಲು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಜಂಟಿ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಮೇಲ್ವಿಚಾರಕರು, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
5) ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.